# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 336 |
| ಮಾನ್ಯ ಸದಸ್ಯರ ಹೆಸರು | ಡಾ:ತಳವಾರ ಸಾಬಣ್ಣ |
| ಉತ್ತರಿಸುವ ದಿನಾಂಕ | 10.03.2025 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಪ್ರತಿಷ್ಠಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕೆಇಎ ಮುಖಾಂತರ ಪ್ರವೇಶ ಪ್ರಕ್ರಿಯೆ ಸಂದರ್ಭದಲ್ಲಿ ಸೀಟ್ ಬ್ಲಾಕಿಂಗ್ ದಂಧೆ ನಡೆಸುವ ವ್ಯವಸ್ಥಿತ ಜಾಲದ ಕುರಿತು ಇದುವರೆಗೆ ಕಠಿಣ ಕ್ರಮಗಳನ್ನು ಕೈಗೊಳ್ಳದಿರಲು ಕಾರಣಗಳೇನು; | 2024ನೇ ಸಾಲಿನ ಇಂಜಿನಿಯರಿಂಗ್ ಕಾಲೇಜುಗಳ ಪ್ರವೇಶ ಪ್ರಕ್ರಿಯೆ ಸಂದರ್ಭದಲ್ಲಿ ಸೀಟ್ ಬ್ಲಾಕಿಂಗ್ ವಿಷಯವು ಸರ್ಕಾರದ ಗಮನಕ್ಕೆ ಬಂದ ತಕ್ಷಣ ತಪ್ಪು ಮಾಡಿದವರನ್ನು ಗುರುತಿಸಿ, ಕಾನೂನು ರೀತಿ ಶಿಕ್ಷೆಗೆ ಒಳಪಡಿಸಲು ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.<br>(ಪ್ರಥಮ ವರ್ತಮಾನದ ವರದಿ ಸಂಖ್ಯೆ: 171/2024). |
| ಆ) | ಸೀಟ್ ಬ್ಲಾಕಿಂಗ್ ವ್ಯವಸ್ಥಿತವಾಗಿ ಹಲವಾರು ವರ್ಷಗಳಿಂದ ನಡೆಯುತ್ತಿದ್ದರೂ ತನಿಖೆಯ ಹೆಸರಿನಲ್ಲಿ ತಪ್ಪಿತಸ್ಥರನ್ನು ಸರ್ಕಾರ ರಕ್ಷಿಸುತ್ತಿದೆಯೇ; | 2024ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸರ್ಕಾರಿ ಕೋಟಾದ ಇಂಜಿನಿಯರಿಂಗ್ ಸೀಟು ಪಡೆದು ಕಾಲೇಜಿಗೆ ಪ್ರವೇಶ ಪಡೆಯದೆ ಇರುವ ಅಭ್ಯರ್ಥಿಗಳಿಗೆ ಆ ಬಗ್ಗೆ ಕಾರಣ ಕೇಳಿ ನೋಟೀಸ್ ಕೊಟ್ಟಿದ್ದು, ಕೆಲವು ಅಭ್ಯರ್ಥಿಗಳು ತಾವುಗಳು ಸೀಟು ಹಂಚಿಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿಲ್ಲವೆಂದು ಹಾಗೂ ಆಪ್ಷನ್ ಎಂಟ್ರಿ ಮಾಡಿಲ್ಲವೆಂದು ಪ್ರಾಧಿಕಾರಕ್ಕೆ ಜವಾಬು ಕೊಟ್ಟಿದ್ದರಿಂದ ಸೀಟ್ ಬ್ಲಾಕಿಂಗ್ ಬಗ್ಗೆ ಅನುಮಾನ ಬಂದು ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ತನಿಖೆ ನಡೆಸಲು ದೂರನ್ನು ಸಲ್ಲಿಸಲಾಗಿದೆ. |
| ಇ) | ಈ ದಂಧೆಯಲ್ಲಿ ತೊಡಗಿರುವ ಅಧಿಕಾರಿಗಳು / ರಾಜಕಾರಣಿಗಳು ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಹಣ ಮಾಡುತ್ತಿರುವುದು ಅರ್ಹತೆ ಹೊಂದಿದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿರುವುದನ್ನು ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ: | ಈ ಪ್ರಕರಣದಲ್ಲಿ ಇದುವರೆಗೂ ಒಟ್ಟು 09 ಜನರನ್ನು ಬಂಧಿಸಿರುವುದಾಗಿ ಮಲ್ಲೇಶ್ವರಂ ಪೊಲೀಸ್ ಠಾಣೆಯಿಂದ ವರದಿ ನೀಡಿರುತ್ತಾರೆ. |

| | | |
|---|---|---|
| ಈ) | ಉನ್ನತ ಶಿಕ್ಷಣ ಇಲಾಖೆಯ/ ಕೆ.ಇ.ಎ. ಅಧಿಕಾರಿಗಳು/ಖಾಸಗಿ ಶಿಕ್ಷಣ ಸಂಸ್ಥೆಗಳು ನೇರವಾಗಿ ಸೀಟ್ ಬ್ಲಾಕಿಂಗ್ ದಂಧೆಯಲ್ಲಿ ಭಾಗಿಯಾಗಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಗಳು ಬರುತ್ತಿದ್ದು, ಅಂತಹ ಅಧಿಕಾರಿಗಳ/ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರವು ಕ್ರಮ ಕೈಗೊಳ್ಳದಿರಲು ಕಾರಣವೇನು: | ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಹೊರಗುತ್ತಿಗೆ ಸಿಬ್ಬಂದಿ ಶ್ರೀ ಅವಿನಾಶ್ ಎಂಬುವರು ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂದು ಪೊಲೀಸರು ಬಂಧಿಸಿದ್ದರಿಂದ ಇವರನ್ನು ದಿನಾಂಕ:4-12-2024ರಂದು ಕೆಲಸದಿಂದ ತೆಗೆದು ಹಾಕಲಾಗಿದೆ.<br><br>ಪ್ರಕರಣವು ತನಿಖಾ ಹಂತದಲ್ಲಿ ಇರುವುದರಿಂದ ಅಂತಿಮ ವರದಿ ಬಂದ ನಂತರ ಆ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ. |

**ಸಂ:ಇಡಿ 44 ಟಿಇಸಿ 2024**

**(ಡಾ.ಎಂ.ಸಿ.ಸುಧಾಕರ್)**
ಉನ್ನತ ಶಿಕ್ಷಣ ಸಚಿವರು